# ಹೂವಾದ ಹುಡುಗಿ

ಅ. ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.

೧. ಮುದುಕಿಯ ಕಿರಿಯ ಮಗಳು ಏಕೆ ಹೂವಿನ  ಗಿಡವಾದಳು?

೨. ಹೂವಾಗುವ ಹುಡುಗಿಯ ವಿಚಾರವನ್ನು ದೊರೆಯ ಮಗ ಯಾರ ಬಳಿ ಹೇಳಿದ?

೩. ದೊರೆಯ ಹೆಂಡತಿ ಹೂವಿಗೆ ಎಷ್ಟು ಹಣ ಕೊಟ್ಟಳು?

೪. ಪಟ್ಟಣಕ್ಕೆ ಹಿಂದಿರುವಾಗ ಅಕ್ಕ ತಮ್ಮನಿಗೆ ಏನು ಉಡುಗೊರೆ ನೀಡಿದಳು?

೫. ದೊರೆಯ ಚಿಕ್ಕಮಗಳು ಗೆಳತಿಯರೊಂದಿಗೆ ಎಲ್ಲಿಗೆ ಹೋದಳು?

ಆ. ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯದಲ್ಲಿ ಉತ್ತರಿಸಿ.

೧. ದೊರೆಯಮಗ ದೇಶಾಂತರ ಹೋಗಲು ಕಾರಣವೇನು?

೨. ಅರ್ಧಂಬರ್ದ ದೇಹವಾಗಿದ್ದವಳು ಹೇಗೆ ರಾಣಿಯ ಅರಮನೆ ಸೇರಿದಳು?

೩. ಅರಮನೆಗೆ ಹೂವು ಎಲ್ಲಿಂದ ಬರುತ್ತದೆಂದು ದೊರೆಮಗ ಹೇಗೆ ಕಂಡು ಹಿಡಿದನು?

೪. ತಂಗಿ ಹೇಗೆ ಹೂವಿನ ಗಿಡವಾಗುತ್ತಿದ್ದಳು?

ಇ. ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯದಲ್ಲಿ  ಉತ್ತರಿಸಿ.

೧. ದೊರೆಯ ಕಿರಿಯ ಮಗಳು ತನ್ನ ಅತ್ತಿಗೆಗೆ ಮಾಡಿದ ದ್ರೋಹವೇನು?

೨. ದೊರೆಯ ಮಗ ತನ್ನ ಹೆಂಡತಿಯನ್ನು ಹೇಗೆ ಪುನಃ ಪಡೆದನು?

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ

ಈ. ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.

೧. “ಅಕ್ಕಯ್ಯ ಅಮ್ಮನಿಗೆ ಹೇಳಬೇಡ ಮುಚ್ಚಿಡು”

೨. “ಅವಳನ್ನು ನೋಡಿದರೆ ನಿಮ್ಮ ತಮ್ಮನ ಹೆಂಡತಿಯಂತೆ ಕಾಣ್ತಾಳೆ,”

೩. “ಯಾರಾದರೂ ಅನ್ನ ನೀರು ಕೊಟ್ಟರೆ ಜೀವ ಉಳಿಸಿಕೋ”

೪. “ಈ ಸಂಪತ್ತಿಗೇಕೆ ನನ್ನ ಮದುವೆ ಆದಿರಿ?”

ಉ. ಖಾಲಿಬಿಟ್ಟ ಜಾಗವನ್ನು ಸೂಕ್ತ ಪದಗಳಿಂದ ತುಂಬಿರಿ.

೧. ನೋಡಕ್ಕಯ್ಯ ನಾನಿಲ್ಲಿ __________ ಧ್ಯಾನಮಾಡಿ ಕುತ್ಕೋತಿನಿ.

೨. ನರಮನುಷ್ಯರು ________________ ಆಗೋದುಂಟೆ ?

೩. ಅವರು ಮಾತಾಡಲೇ ಇಲ್ಲವಲ್ಲ, ಮತ್ತೇಕೆ ___________ಯಾದರು.

೪. ದಿನವಹಿ ಮೈಮೇಲಿನ ಗಾಯಗಳಿಗೆ ___________ ಹಾಕಿ ವಾಸಿಮಾಡಿದರು.

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ

**ಚಟುವಟಿಕೆ**

ಕೊಟ್ಟಿರುವ ಪದಗಳನ್ನು ಸ್ವಂತ ವಾಕ್ಯಗಳಲ್ಲಿ ಬಳಸಿ.

೧. ಬಡವರು :

೨. ಧ್ಯಾನಮಾಡು :

೩. ಉಡುಗೊರೆ :

೪. ಸಂಪಾದನೆ :

ಕೊಟ್ಟಿರುವ ವಾಕ್ಯಗಳನ್ನು ಗ್ರಾಂಥಿಕ ರೂಪದಲ್ಲಿ ಬರೆಯಿರಿ.

೧. ತಾಯಿ ಅಣ್ಣನ ಕೇಳ್ಕೊಂಡು ಕರ್ಕೊಂಡೋಗು ಅನ್ತಾಳೆ.

೨. ದಾದೇರು ಗೋಗರೆದದ್ದಕ್ಕೆ ಒಪ್ಕತಾಳೆ.

೩. ನೀನು ಹೂ ತಕ್ಕೊಂಡು ಹೋಗಿ ಮರ್ಕೊಂಡು ಬಂದ್ಬಿಡೇ.

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ